# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಸರಳ ಸಾಮೂಹಿಕ ವಿವಾಹವನ್ನು ಜನಪ್ರಿಯಗೊಳಿಸಲು "ಆದರ್ಶ ವಿವಾಹ ಯೋಜನೆಯ" ಅನುಷ್ಠಾನಕ್ಕಾಗಿ ಪ್ರಾದೇಶಿಕ ಆಯುಕ್ತರುಗಳಿಗೆ ಅನುದಾನ ಬಿಡುಗಡೆ ಮಾಡುವ ಬಗ್ಗೆ.

**ಉಲ್ಲೇಖ:** 1) ಸರ್ಕಾರದ ಆದೇಶ ಸಂಖ್ಯೆ: ಆರ್‌ಡಿ 81 ಎಂಎಸ್‌ಟಿ 07, ದಿನಾಂಕ:02/05/2008.

2) ಸರ್ಕಾರದ ಆದೇಶ ಸಂಖ್ಯೆ: ಆರ್‌ಡಿ 5 ಎಡಿಎಂ 2008, ದಿನಾಂಕ:19/09/2008

3) ಸರ್ಕಾರದ ಆದೇಶ ಸಂಖ್ಯೆ: ಆರ್‌ಡಿ 1 ಎಡಿಎಂ 2009, ದಿನಾಂಕ:05/10/2009.

4) ಸಂ.ಸಾಭಯೋ/ವಹಿ–4/2009–10, ದಿನಾಂಕ: /12/2009.

**ಪ್ರಸ್ತಾವನೆ:**

ಕರ್ನಾಟಕ ಸರ್ಕಾರವು ರಾಜ್ಯದಲ್ಲಿ ಸರಳ ಸಾಮೂಹಿಕ ವಿವಾಹವನ್ನು ಜನಪ್ರಿಯಗೊಳಿಸಲು ಆದರ್ಶ ವಿವಾಹ ಯೋಜನೆಯನ್ನು ಮೇಲೆ ಓದಲಾದ ಉಲ್ಲೇಖ 1 ರನ್ವಯ ರಾಜ್ಯದಲ್ಲಿ ಜಾರಿಗೆ ತಂದಿದ್ದು, ನಗರ ಪ್ರದೇಶಗಳಲ್ಲಿ ಕನಿಷ್ಟ 25 ಜೋಡಿಗಳು ಹಾಗೂ ಉಲ್ಲೇಖ 2 ರನ್ವಯ ಗ್ರಾಮಾಂತರ ಪ್ರದೇಶದಲ್ಲಿ ಕನಿಷ್ಟ 10 ಜೋಡಿಗಳ ವಿವಾಹಗಳು ನಡೆದಿರುವ ಸಾಮೂಹಿಕ ವಿವಾಹ ಕಾರ್ಯಕ್ರಮದಲ್ಲಿ ವಿವಾಹವಾದವರು ಮಾತ್ರ ಈ ಯೋಜನೆಯ ಅನುಕೂಲ ಪಡೆಯಲು ಅರ್ಹತೆ ಹೊಂದಿರುತ್ತಾರೆ. ಈ ಯೋಜನೆಯನ್ನು ಯಶಸ್ವಿಯಾಗಿ ಜಾರಿಗೊಳಿಸಲು 2009–10 ನೇ ಸಾಲಿನ ಆಯವ್ಯಯದ ಲೆಕ್ಕ ಶೀರ್ಷಿಕೆ 2250–00–800–2–17–059 (ಯೋಜನೆ) ರಲ್ಲಿ ರೂ. 1000 ಲಕ್ಷಗಳನ್ನು ಒದಗಿಸಲಾಗಿದೆ. ಈ ಪೈಕಿ ಜಿಲ್ಲಾಧಿಕಾರಿಗಳು, ಗದಗ ಜಿಲ್ಲೆ ರವರಿಗೆ ಉಲ್ಲೇಖ 3 ರನ್ವಯ ರೂ.100 ಲಕ್ಷಗಳನ್ನು ಬಿಡುಗಡೆ ಮಾಡಲಾಗಿತ್ತು. ಉಲ್ಲೇಖ 4 ರನ್ವಯ ಜಿಲ್ಲಾಧಿಕಾರಿಗಳು, ಗದಗ ಜಿಲ್ಲೆ ಇವರು ಸದರಿ ಜಿಲ್ಲೆ ಹಾಗೂ ಇತರೆ ಜಿಲ್ಲೆಯ ಮಾಹಿತಿಯನ್ವಯ ಒಟ್ಟು 1738 ಜೋಡಿಗಳಿಗೆ ವಿವಾಹ ಜರುಗಿರುತ್ತವೆ. ಇದರಲ್ಲಿ ಗದಗ ಜಿಲ್ಲೆಯ 1128 ಜೋಡಿಗಳು ಒಳಪಟ್ಟಿದ್ದು, ಇದಕ್ಕೆ ಒಟ್ಟು ರೂ.112.80 ಲಕ್ಷ ಅನುದಾನದ ಅವಶ್ಯಕತೆ ಇದ್ದು, ಸದರಿ ಜಿಲ್ಲೆಗೆ ಈಗಾಗಲೇ ಯೋಜನೆಯಡಿ ರೂ.107.14 ಲಕ್ಷಗಳು ಬಿಡುಗಡೆಯಾಗಿದೆ. ಬಿಡುಗಡೆಯಾಗಿರುವ ಅನುದಾನ 1071 ಜೋಡಿಗಳಿಗೆ ನೀಡಲಾಗಿದ್ದು, ಇನ್ನೂ 57 ಜೋಡಿಗಳಿಗೆ ರೂ.5.66 ಲಕ್ಷಗಳ ಅನುದಾನ ಬಿಡುಗಡೆ ಮಾಡುವಂತೆ ಪ್ರಸ್ತಾವನೆ ಸಲ್ಲಿಸಿರುವ ಹಿನ್ನೆಲೆಯಲ್ಲಿ ರೂ.5.66 ಲಕ್ಷಗಳನ್ನು ಗದಗ ಜಿಲ್ಲಾಧಿಕಾರಿಗಳಿಗೆ ಅನುದಾನ ಬಿಡುಗಡೆ ಮಾಡಿ ಆದೇಶಿಸಲಾಗಿದೆ. ಅದರಂತೆ ಈ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

## ಸರ್ಕಾರದ ಆದೇಶ ಸಂಖ್ಯೆ: ಆರ್‌ಡಿ 1 ಎಡಿಎಂ 2009, ಬೆಂಗಳೂರು. ದಿನಾಂಕ:11/02/2010.

ಆದರ್ಶ ವಿವಾಹ ಯೋಜನೆಯಡಿ ಫಲಾನುಭವಿಗಳಿಗೆ ಪ್ರೋತ್ಸಾಹ ಧನ ನೀಡಲು ಹೆಚ್ಚುವರಿ ಅನುದಾನವನ್ನು ರೂ.5.66 ಲಕ್ಷಗಳನ್ನು (ಐದು ಲಕ್ಷದ ಅರವತ್ತಾಆರು ಸಾವಿರಗಳು ಮಾತ್ರ) ಜಿಲ್ಲಾಧಿಕಾರಿಗಳು, ಗದಗ ಜಿಲ್ಲೆ ಇವರಿಗೆ ಬಿಡುಗಡೆ ಮಾಡಲಾಗಿದೆ. ಈ ಯೋಜನೆಗೆ ತಗುಲುವ ವೆಚ್ಚವನ್ನು 2009–10 ನೇ ಆರ್ಥಿಕ ಸಾಲಿನ ಲೆಕ್ಕ ಶೀರ್ಷಿಕೆ 2250–00–800–2–17–059 ರ ಅಡಿಯಲ್ಲಿ ಒದಗಿಸಲಾದ ಅನುದಾನದಲ್ಲಿ ಭರಿಸತಕ್ಕದ್ದು. ಈ ಯೋಜನೆಯ ಉಸ್ತುವಾರಿಯನ್ನು ಪ್ರಾದೇಶಿಕ ಆಯುಕ್ತರು ಮಾಡತಕ್ಕದ್ದು.

ಮೇಲ್ಕಂಡಂತೆ ಮಂಜೂರಾದ ಮೊತ್ತವು ಆದರ್ಶ ವಿವಾಹ ಯೋಜನೆಯ ಅನುಷ್ಠಾನಕ್ಕಾಗಿ ಮಾತ್ರ ಉಪಯೋಗಿಸತಕ್ಕದ್ದು.

ಈ ಹಣವನ್ನು ಜಿಲ್ಲಾಧಿಕಾರಿಗಳ ಪಿ.ಡಿ ಖಾತೆಗೆ ಯಾವುದೇ ಕಾರಣಕ್ಕೂ ಹಾಕಬಾರದು ಹಾಗೂ ಹಣವನ್ನು ಖಜಾನೆ ಇಲಾಖೆಯ ಮುಖಾಂತರವೇ ವಿನಿಯೋಗಿಸತಕ್ಕದ್ದು. ಪ್ರಾದೇಶಿಕ ಆಯುಕ್ತರು ಬಿಡುಗಡೆಯಾದ ಅನುದಾನದ ಆರ್ಥಿಕ ಹಾಗೂ ಭೌತಿಕ ಪ್ರಗತಿ ವರದಿಗಳನ್ನು ಸಂಬಂಧಪಟ್ಟ ಜಿಲ್ಲಾಧಿಕಾರಿಗಳಿಂದ ಮಾಹಿತಿಯನ್ನು ಪಡೆದು ನಿರ್ದೇಶಕರು, ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳ ನಿರ್ದೇಶನಾಲಯ, ಬೆಂಗಳೂರು ಹಾಗೂ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ಈ ಆದೇಶವನ್ನು ಸರ್ಕಾರಿ ಆದೇಶ ಸಂಖ್ಯೆ: ಎಫ್‌ಡಿ 1 ಟಿಎಫ್‌ಡಿ 1996, ದಿನಾಂಕ:10/07/1996 ರಲ್ಲಿ ಇಲಾಖಾ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಅಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಸ್.ಕಾತ್ಯಾಯಿನಿ ದೇವಿ) 11/2/10
ಪೀಠಾಧಿಕಾರಿಗಳು,
ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳ
ನಿರ್ದೇಶನಾಲಯ, ಕಂದಾಯ ಇಲಾಖೆ.

**ಇವರಿಗೆ,**

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು, ಇವರಿಗೆ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಪ್ರಕಟಿಸಿ 500 ಪ್ರತಿಗಳನ್ನು ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳ ನಿರ್ದೇನಾಲಯಕ್ಕೆ ಕಳುಹಿಸಬೇಕೆಂದು ಕೋರಿದೆ.

**ಪ್ರತಿಯನ್ನು:**

1. ಮಹಾಲೇಖಪಾಲರು (ಲೆಕ್ಕಪತ್ರ ಮತ್ತು ಲೆಕ್ಕ ತಪಾಸಣೆ) (ಎ ಮತ್ತು ಇ) ಕರ್ನಾಟಕ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
3. ಸರ್ಕಾರದ ಕಾರ್ಯದರ್ಶಿಗಳು, ಕಂದಾಯ ಇಲಾಖೆ, ಬೆಂಗಳೂರು.
4. ಪ್ರಾದೇಶಿಕ ಆಯುಕ್ತರು, ಬೆಳಗಾವಿ.
5. ಜಿಲ್ಲಾಧಿಕಾರಿಗಳು, ಗದಗ ಜಿಲ್ಲೆ.
6. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
7. ಜಿಲ್ಲಾ ಖಜಾನೆ ಹಾಗೂ ಉಪ ಖಜಾನೆ ಅಧಿಕಾರಿಗಳು.
8. ಉಪ ವಿಭಾಗಧಿಕಾರಿಗಳು/ತಹಸೀಲ್ದಾರರುಗಳಿಗೆ.
9. ಹೆಚ್ಚುವರಿ ಪ್ರತಿ ಮತ್ತು ರಕ್ಷಾ ಕಡತ.